ಗಣಕೀಕರಣ
17/3
S

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1257

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎನ್. ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 17.03.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಯಚೂರು ಜಿಲ್ಲೆಯಲ್ಲಿ ಇರುವ ಬಿ.ಪಿ.ಎಲ್ ಪಡಿತರದಾರರು ಎಷ್ಟು; ಸದರಿ ಬಿ.ಪಿ.ಎಲ್ ಪಡಿತರದಾರರಿಗೆ ಹಂಚಿಕೆ ಮಾಡುತ್ತಿರುವ ಪಡಿತರ ಪ್ರಮಾಣ ಎಷ್ಟು; | ದಿನಾಂಕ: 12-03-2020 ರಲ್ಲಿದ್ದಂತೆ ರಾಯಚೂರು ಜಿಲ್ಲೆಯಲ್ಲಿರುವ ಪಡಿತರ ಚೀಟಿಗಳ ಮಾಹಿತಿ ಈ ಕೆಳಕಂಡಂತಿದೆ.<br><br>ಪಡಿತರ ಚೀಟಿ ವಿವರ — ಸಂಖ್ಯೆ<br>ಅಂತ್ಯೋದಯ (ಎಎವೈ) — 53,056<br>ಆದ್ಯತಾ (ಬಿ.ಪಿ.ಎಲ್) — 4,04,239<br>ಆದ್ಯತೇತರ (ಎ.ಪಿ.ಎಲ್) — 29,811<br>ಒಟ್ಟು — 4,87,106<br><br>ಪ್ರತಿ ಅಂತ್ಯೋದಯ ಪಡಿತರ ಚೀಟಿಗೆ 35 ಕೆ.ಜಿ ಅಕ್ಕಿಯನ್ನು ಹಾಗೂ ಆದ್ಯತಾ ಪಡಿತರ ಚೀಟಿ (ಬಿ.ಪಿ.ಎಲ್) ಯನ್ನು ಹೊಂದಿರುವ ಕುಟುಂಬದ ಪ್ರತಿ ಸದಸ್ಯರಿಗೆ ತಲಾ 7 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ. |
| ಆ | ರಾಯಚೂರು ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಇರುವ ನ್ಯಾಯಬೆಲೆ ಅಂಗಡಿಗಳಿಂದ ಪಡಿತರದಾರರಿಗೆ ಸರಿಯಾದ ವೇಳೆಗೆ ಪಡಿತರ ಹಂಚಿಕೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ಜಿಲ್ಲೆ ಗ್ರಾಮಾಂತರ ಪ್ರದೇಶದಲ್ಲಿ ನ್ಯಾಯಬೆಲೆ ಅಂಗಡಿಗಳಿಂದ ಸರಿಯಾದ ವೇಳೆಗೆ ಪಡಿತರ ವಿತರಣೆ ಮಾಡದೇ ಇರುವ ವಿಷಯಕ್ಕೆ ಸಂಬಂಧಿಸಿದಂತೆ 2018-19 ಮತ್ತು 2019-2020ನೇ ಸಾಲಿನಲ್ಲಿ ಒಟ್ಟು 8 ಪ್ರಕರಣಗಳು ದಾಖಲಿಸಲಾಗಿರುತ್ತದೆ. ಈ ಪೈಕಿ 2 ನ್ಯಾಯಬೆಲೆ ಅಂಗಡಿಗಳ ಭದ್ರತಾ ಠೇವಣಿ ತಲಾ ರೂ. 5,000/-ಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಇನ್ನೇರಡು ಪ್ರಕರಣಗಳಿಗೆ ಸಂಬಂಧಿಸಿದಂತೆ ಭದ್ರತಾ ಠೇವಣಿ ರೂ. 5000/- ಗಳನ್ನು ಮುಟ್ಟುಗೋಲು ಹಾಕಿಕೊಳ್ಳುವುದರೊಂದಿಗೆ ಕ್ರಮವಾಗಿ ರೂ. 1440/- ಮತ್ತು ರೂ.1050/-ಗಳ ದಂಡವನ್ನು ವಿಧಿಸಲಾಗಿದೆ. ಒಂದು ಪ್ರಕರಣದಲ್ಲಿ ನ್ಯಾಯಬೆಲೆ ಅಂಗಡಿಯ ಪ್ರಾಧಿಕಾರವನ್ನು ರದ್ದುಪಡಿಸಲಾಗಿರುತ್ತದೆ. ಎರಡು ಪ್ರಕರಣಗಳನ್ನು ದೂರು ಸಾಬೀತಾಗದ ಕಾರಣ ಮುಕ್ತಾಯಗೊಳಿಸಲಾಗಿದೆ. ಒಂದು ಪ್ರಕರಣ ವಿಚಾರಣೆ ಹಂತದಲ್ಲಿರುತ್ತದೆ. |

ಆನಾಸ 100 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.